ಸಮಾಚಾರ ಸಣ್ಣದಲ್ಲ

ರಾಣಾಗೆ ಬೆದರಿಕೆ: ಎಫ್‌ಐಆರ್ ದಾಖಲು

ಅಮರಾವತಿ: ಸಂಸದೆ ನವನೀತ್ ರಾಣಾಗೆ ವಾಟ್ಸ್‌ಆ್ಯಪ್ ಮೂಲಕ ಕೊಲೆ ಬೆದರಿಕೆ ಹಾಕಿದ್ದ ಆರೋಪದಡಿ ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಆಡಿಯೊ ಸಂದೇಶದಲ್ಲಿ ನವನೀತ್ ರಾಣಾ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸಿರುವುದಾಗಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ರಾಣಾ ಮೊಬೈಲ್‌ಗೆ ಮಾ.3 ರಂದು ಕೊಲೆ ಬೆದರಿಕೆ ಸಂದೇಶ ರವಾನೆಯಾಗಿದೆ. ಆಡಿಯೊದಲ್ಲಿ ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ವಿರುದ್ಧವೂ ಆಕ್ಷೇಪಾರ್ಹ ಪದ ಬಳಕೆ ಮಾಡಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ. ರಾಣಾ ನೀಡಿದ ದೂರಿನ ಆಧಾರದ ಮೇಲೆ ಐಪಿಸಿಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ತನಿಖೆ ನಡೆಸಲಾಗುತ್ತಿದ್ದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ತಿಳಿಸಿದ್ದಾರೆ.

ಹಣ ದುರುಪಯೋಗ ಪ್ರಕರಣ ವಿಚಾರಣೆ

ಭುವನೇಶ್ವರ: ಕಾಲೇಜು ಹಣ ದುರುಪಯೋಗ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಒಡಿಶಾದ ಬಿಜೆಡಿ ಶಾಸಕನ ಪುತ್ರನನ್ನು ಜಾರಿ ನಿರ್ದೇಶನಾಲಯ (ಇ.ಡಿ) 18 ತಾಸು ವಿಚಾರಣೆಗೊಳಪಡಿಸಿದೆ. ಒಡಿಶಾದ ಭದ್ರಕ್ ಜಿಲ್ಲೆಯ ಖಾಸಗಿ ಕಾಲೇಜಿನ ಹಣ ದುರ್ಬಳಕೆ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಡಿ ಶಾಸಕ ಪ್ರಫುಲ್ಲ ಸಮಲ್ ಅವರ ಪುತ್ರ ಪ್ರಯಾಸ್ ಕಾಂತಿ ಸಮಲ್ ಅವರನ್ನು ಇ.ಡಿ, ಸತತ 18 ತಾಸು ಕಾಲ ವಿಚಾರಣೆಗೆ ಒಳಪಡಿಸಿತು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ ವಾರವಷ್ಟೇ ಶಾಸಕರನ್ನು 8 ತಾಸು ವಿಚಾರಣೆ ಮಾಡಿತ್ತು. ಮಂಗಳವಾರ ಆರಂಭವಾದ ವಿಚಾರಣೆ ಬುಧವಾರ ಬೆಳಗ್ಗಿನ ಜಾವ 4.30ರವರೆಗೆ ಮುಂದುವರಿಯಿತು. ಬರಪದ ಸ್ಕೂಲ್ ಆಫ್ ಎಂಜಿನಿಯರಿಂಗ್ ಆಯಂಡ್ ಟೆಕ್ನಾಲಜಿಯ ಕೋಟ್ಯಂತರ ರೂಪಾಯಿ ದುರುಪಯೋಗ ಮಾಡಿದ ಪ್ರಕರಣದಲ್ಲಿ ಆರೋಪಿ ಮನೆಯಿಂದ ಕಳೆದ ತಿಂಗಳಲ್ಲಿ ₹9 ಲಕ್ಷ ಮತ್ತು ಕಾರನ್ನು ಇ.ಡಿ ವಶಪಡಿಸಿತ್ತು.

ಸ್ನೇಹಿತನ ಸಾವಿನ ಜಾಗದಲ್ಲೇ ಆತ್ಮಹತ್ಯೆ

ಮಧ್ಯಪ್ರದೇಶ: ರಸ್ತೆ ಅಪಘಾತದಲ್ಲಿ ಸ್ನೇಹಿತನನ್ನು ಕಳೆದುಕೊಂಡ ವ್ಯಕ್ತಿಯೊಬ್ಬ ಅಪಘಾತ ನಡೆದ ಸ್ಥಳದಲ್ಲಿಯೇ ವಿಡಿಯೊ ಹೇಳಿಕೆ ಚಿತ್ರೀಕರಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆತ್ಮಹತ್ಯೆ ಮಾಡಿಕೊಂಡ ಯುವಕನನ್ನು ಕಾಂತಿ (28) ಎಂದು ಗುರುತಿಸಲಾಗಿದೆ. ಇಂದೋರ್-ಅಹಮದಾಬಾದ್ ಹೆದ್ದಾರಿಯಲ್ಲಿ ಕಾಂತಿ ಹಾಗೂ ಆತನ ಸ್ನೇಹಿತ ನರ್ವೆ ಸಿಂಗ್ (29) ಪ್ರಯಾಣಿಸುತ್ತಿದ್ದ ಬೈಕ್‌ಗೆ ಮತ್ತೊಂದು ಬೈಕ್ ಡಿಕ್ಕಿ ಹೊಡೆದು ಸಿಂಗ್ ಮೃತಪಟ್ಟಿದ್ದರು. ಕಾಂತಿ ಬದುಕುಳಿದಿದ್ದರು. ಉಜ್ಜಯಿನಿಯಿಂದ ಝಬುವಾಗೆ ಹಿಂತಿರುಗುತ್ತಿದ್ದ ವೇಳೆ ಈ ಘಟನೆ ನಡೆದಿದೆ.

ಅಪಘಾತ ಏಳು ಸಾವು

ದೆಹಲಿ: ನಿಂತಿದ್ದ ಟ್ರಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ನವವಿವಾಹಿತರು ಸೇರಿ ಒಂದೇ ಕುಟುಂಬದ ನಾಲ್ಕು ಮಂದಿ ಸಾವನ್ನಪ್ಪಿದ್ದಾರೆ. ಬುಧವಾರ ಆಂಧ್ರಪ್ರದೇಶದ ನಂದ್ಯಾಳದ ಅಲ್ಲಗಡ್ಡ ಮಂಡಲದ ನಲ್ಲಗಟ್ಲ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತ ಸಂಭವಿಸಿದೆ. ನಂದ್ಯಾಲ ಎಸ್‌ಪಿ ಕೆ.ರಘುವೀರಾ ರೆಡ್ಡಿ ಮಾತನಾಡಿ, ಕುಟುಂಬವು ತಿರುಪತಿಯ ದೇವಸ್ಥಾನಕ್ಕೆ ಭೇಟಿ ನೀಡಿ ಹಿಂತಿರುಗುತ್ತಿತ್ತು ನಲ್ಲಗಟ್ಲ ಗ್ರಾಮದಲ್ಲಿ ಅಪಘಾತ ಸಂಭವಿಸಿದೆ ಎಂದು ಹೇಳಿದ್ದಾರೆ. ಟ್ರಕ್ ಚಾಲಕ ಗಾಡಿಯನ್ನು ರಸ್ತೆಯ ಬದಿಗೆ ನಿಲ್ಲಿಸಿದ್ದರು, ಅದೇ ಸಮಯದಲ್ಲಿ ಕಾರೊಂದು ಬಂದು ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಐದು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಪರೀಕ್ಷೆ ಅಕ್ರಮ: 7 ಮಂದಿ ಬಂಧನ

ಮೀರತ್: ಉತ್ತರ ಪ್ರದೇಶದ ಪೊಲೀಸ್ ನೇಮಕಾತಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರ ವಿಶೇಷ ಕಾರ್ಯಪಡೆ ಯು ಮೀರತ್ ಮತ್ತು ದೆಹಲಿಯಲ್ಲಿ 7 ಆರೋಪಿಗಳನ್ನು ಬಂಧಿಸಿದೆ. ಬಂಧಿತರು ಪೊಲೀಸ್ ನೇಮಕಾತಿ ಮತ್ತು ಬಡ್ತಿ ಮಂಡಳಿ ಪ್ರಶ್ನೆಪತ್ರಿಕೆ ಸೋರಿಕೆಯಲ್ಲಿ ಭಾಗಿಯಾಗಿರುವ ಗುಂಪಿನ ಸದಸ್ಯರಾಗಿದ್ದಾರೆ ಎಂದು ಆರೋಪಿಸಲಾಗಿದೆ. ಮೀರತ್ ಜಿಲ್ಲೆಯ ನಿವಾಸಿಗಳಾದ ದೀಪಕ್, ಬಿಟ್ಟು, ಪ್ರವೀಣ್, ರೋಹಿತ್, ನವೀನ್, ಸಾಹಿಲ್ ಅವರನ್ನು ಮಂಗಳವಾರ ರಾತ್ರಿ ಕಂಕೇರ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಂಧಿಸಲಾಗಿದೆ. ಗೌತಮ ಬುದ್ಧ ನಗರದ ಪ್ರಮೋದ್ ಪಾಠಕ್ ಎಂಬ ಮತ್ತೊಬ್ಬ ಆರೋಪಿಯನ್ನು ದೆಹಲಿಯ ಮುಖರ್ಜಿ ನಗರದಲ್ಲಿ ಬಂಧಿಸಲಾಗಿದೆ. ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆ ಕೊಡುವುದು ಮತ್ತು ಪ್ರಶ್ನೆಗಳಿಗೆ ಉತ್ತರ ಹುಡುಕಿಕೊಡುವ ನುರಿತರನ್ನು ವ್ಯವಸ್ಥೆ ಮಾಡುವ ಕೆಲಸವನ್ನು ಈ ಗುಂಪು ಮಾಡುತ್ತಿತ್ತು ಎಂದು ಪ್ರಕಟಣೆ ತಿಳಿಸಿದೆ.

ವಹಿವಾಟು

ಬಿಎಸ್‌ಇ ಸೆನ್ಸೆಕ್ಸ್ 74,085.99	ನಿಫ್ಟಿ 22,474.05
ಚಿನ್ನ (10ಗ್ರಾಂ) ₹ 66,540	ಬೆಳ್ಳಿ (ಕೆ.ಜಿಗೆ) ₹ 74,000
ಪೆಟ್ರೋಲ್ (ಪ್ರತಿ ಲೀ) ₹ 101.94	ಡೀಸೆಲ್ (ಪ್ರತಿ ಲೀ) ₹ 87.89
ಅಮೆರಿಕನ್ ಡಾಲರ್ ₹ 82.86	ಇಂಗ್ಲೆಂಡ್ ಪೌಂಡ್ ₹ 105.40

ನಮ್ಮದು ಜನ ಕಲ್ಯಾಣ ಕುಟುಂಬ

ಪ್ರಧಾನಿ ಕುಟುಂಬ ರಾಜಕಾರಣ ಹೇಳಿಕೆಗೆ ತ.ನಾಡು ಸಿಎಂ ಸ್ಟಾಲಿನ್ ವಾಗ್ದಾಳಿ

ಚೆನ್ನೈ: 'ಸಹಸ್ರಾರು ಕೋಟಿ ರುಪಾಯಿಯ ಹಗರಣಗಳನ್ನು ಬಹಿರಂಗಪಡಿಸುತ್ತಿರುವ ಕಾರಣ ಕುಟುಂಬ ರಾಜಕಾರಣ ನಡೆಸುತ್ತಿರುವ ಪಕ್ಷಗಳು ತಮ್ಮನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸುತ್ತಿವೆ ಎಂಬ ಪ್ರಧಾನಿ ಮೋದಿ ಹೇಳಿಕೆಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, 'ತಮಿಳುನಾಡಿನಲ್ಲಿ ಕುಟುಂಬ ರಾಜಕಾರಣ ಇರುವುದು ನಿಜ. ಆದರೆ, ನಮ್ಮ ಕುಟುಂಬ ರಾಜ್ಯದ ಪ್ರತಿಯೊಬ್ಬರ ಕಲ್ಯಾಣಕ್ಕಾಗಿ ಶ್ರಮಿಸುತ್ತಿದೆ' ಎಂದು ಹೇಳಿದ್ದಾರೆ. ಕೆಲವರು (ಬಿಜೆಪಿಗರು) ತಮಿಳುನಾಡಿನಲ್ಲಿ ಡಿಎಂಕೆ ಕುಟುಂಬ ರಾಜಕಾರಣ ನಡೆಸುತ್ತಿದೆ ಎಂದು ಹೇಳುತ್ತಾರೆ.

ಹೌದು, ನಮ್ಮದು ಕುಟುಂಬ ರಾಜಕಾರಣವೇ! ತಮಿಳುನಾಡಿನ ಪ್ರತಿ ಕುಟುಂಬಕ್ಕೂ ಸಹಾಯ ಹಸ್ತ ನೀಡುವ ಕುಟುಂಬ ಎಂದು ಮೋದಿ ವಿರುದ್ಧ ಸ್ಟಾಲಿನ್ ಲೇವಡಿ ಮಾಡಿದ್ದಾರೆ. 'ಕೇಂದ್ರದ ಹಣ ನೇರವಾಗಿ ರಾಜ್ಯದ ಜನತೆಗೆ ತಲುಪುತ್ತಿದೆ ಎಂದು ಮೋದಿ ಹೇಳಿದ್ದಾರೆ. ಆದರೆ, ಪ್ರವಾಹ ಸಂತ್ರಸ್ತರಿಗೆ ಕೇಂದ್ರದಿಂದ ಒಂದು ರುಪಾಯಿಯೂ ಸಿಕ್ಕಿಲ್ಲ. ಕೇಂದ್ರದಿಂದ ಯಾರಾದರೂ ಪರಿಹಾರ ಪಡೆದಿದ್ದರೆ ಸಾಬೀತುಪಡಿಸಲಿ' ಎಂದು ಸ್ಟಾಲಿನ್ ಕುಟುಕಿದ್ದಾರೆ. 'ಚೆನ್ನೈ, ತೂತುಕುಡಿ ಸೇರಿದಂತೆ ಎಂಟು ಜಿಲ್ಲೆಗಳಲ್ಲಿ ಪ್ರವಾಹ ಉಂಟಾಗಿ ಅಪಾರ ನಷ್ಟ ಸಂಭವಿಸಿತ್ತು. ಇದರಿಂದಾಗಿ ₹37,000 ಕೋಟಿ ಪರಿಹಾರ ನೀಡುವಂತೆ ನಾವು ಕೇಂದ್ರಕ್ಕೆ ಮನವಿ ಮಾಡಿದ್ದೆವು. ಆದರೆ, ಈವರೆಗೆ ಪ್ರಧಾನಿ ಮೋದಿಯವರು ಕನಿಷ್ಠ ₹1 ಕೂಡ ಬಿಡುಗಡೆ ಮಾಡಿಲ್ಲ' ಎಂದು ಸ್ಟಾಲಿನ್ ಗುಡುಗಿದ್ದಾರೆ.

ಸ್ಯಾಂಡಲ್‌ವುಡ್ ನಟ ರಕ್ಷಿತ್ ಶೆಟ್ಟಿ ಅಯೋಧ್ಯೆಯ ರಾಮಮಂದಿರಕ್ಕೆ ಭೇಟಿ ನೀಡಿ ಬಾಲಕರಾಮನ ದರ್ಶನ ಪಡೆದರು.

ನೀರವ್, ಮಲ್ಯ ಜತೆ ಮೋದಿ ಫೋಟೋ

ದೆಹಲಿ: ಉದ್ಯಮಿಗಳಾದ ನೀರವ್ ಮೋದಿ ಮತ್ತು ವಿಜಯ್ ಮಲ್ಯ ಅವರೊಟ್ಟಿಗೆ ಪ್ರಧಾನಿ ನರೇಂದ್ರ ಮೋದಿ ಅವರಿರುವ ಭಿತ್ತಿಪತ್ರಗಳನ್ನು ಕೇಂದ್ರ ದೆಹಲಿಯ ಹಲವೆಡೆ ಪ್ರದರ್ಶಿಸಲಾಗಿದೆ. ಇದಕ್ಕೆ ಸಂಬಂಧಿಸಿ ದೆಹಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ಬುಧವಾರ ತಿಳಿಸಿದರು. ಈ ಭಿತ್ತಿಪತ್ರಗಳ ಮೇಲೆ 'ಮೋದಿ ಕಾ ಅಸ್ಲಿ ಪರಿವಾರ್' (ಮೋದಿ ಅವರ ಅಸಲಿ ಪರಿವಾರ) ಎಂದು ಬರೆಯಲಾಗಿದೆ. ಅದರ ಅಡಿಯಲ್ಲಿ ಭಾರತೀಯ ಯುವ ಕಾಂಗ್ರೆಸ್ ಎಂದು ಬರೆಯಲಾಗಿದೆ.

ನವದೆಹಲಿಯ ಮಹಾನಗರ ಪಾಲಿಕೆಯ ಅಧಿಕಾರಿಯೊಬ್ಬರು ನೀಡಿದ್ದ ದೂರು ಆಧ ರಿಸಿ, ದೆಹಲಿ ಸ್ವತ್ತುಗಳ ವಿರೂಪ ತಡೆ ಕಾಯಿದೆ ಅಡಿ ಅಪರಿಚಿತರ ವಿರುದ್ಧ ತುಘಲಕ್ ರಸ್ತೆಯ ಪೊಲೀಸ್ ಠಾಣೆಯಲ್ಲಿ ಮಂಗಳ ವಾರ ಪ್ರಕರಣ ದಾಖಲಿಸಲಾಗಿದೆ. ಈ ಭಿತ್ತಿ ಪತ್ರಗಳನ್ನು ಪ್ರಕಟಿಸಿದ ಮತ್ತು ಅಂಟಿಸಿದವರ ಹೆಸರನ್ನು ಅವುಗಳ ಮೇಲೆ ಲಗತ್ತಿಸಲಾಗಿಲ್ಲ ಎಂದು ಹಿರಿಯ ಪೊಲೀಸ್ ಅಧಿಕಾರಿ ಹೇಳಿದ್ದಾರೆ.

ಬಂಗಾಳದೆಲ್ಲೆಡೆ ವ್ಯಾಪಿಸಲಿದೆ ಸಂದೇಶ್‌ಖಾಲಿ ಬಿರುಗಾಳಿ

ಪಶ್ಚಿಮ ಬಂಗಾಳದ ಬಾರಾಸತ್‌ನಲ್ಲಿ ಪ್ರಧಾನಿ ಮೋದಿ ಹೇಳಿಕೆ । ಸಂತ್ರಸ್ತ ಮಹಿಳೆಯರನ್ನು ಭೇಟಿಯಾಗಿ ಮಾತು। ಟಿಎಂಸಿ ವಿರುದ್ಧ ತೀವ್ರ ವಾಗ್ದಾಳಿ

ಬಾರಾಸತ್: ಸಂದೇಶ್‌ಖಾಲಿ ಬಿರುಗಾಳಿ ಪಶ್ಚಿಮ ಬಂಗಾಳದ ಮೂಲೆ ಮೂಲೆಗೂ ವ್ಯಾಪಿಸಲಿದೆ. ಲೋಕಸಭಾ ಚುನಾವಣೆಗಳಲ್ಲಿ ತೃಣಮೂಲ ಕಾಂಗ್ರೆಸ್ ಪಕ್ಷವನ್ನು ಧೂಳೀಪಟ ಮಾಡುವಲ್ಲಿ 'ನಾರಿ ಶಕ್ತಿ' ಪ್ರಮುಖ ಪಾತ್ರ ವಹಿಸಲಿದೆ' ಎಂದು ಪ್ರಧಾನಿ ನರೇಂದ್ರ ಮೋದಿ ಬುಧವಾರ ಹೇಳಿದರು.

ಉತ್ತರ 24 ಪರಗಣ ಜಿಲ್ಲೆಯ ಕೇಂದ್ರ ಸ್ಥಾನವಾದ ಬಾರಾಸತ್‌ನಲ್ಲಿ ನಡೆದ 'ನಾರಿ ಶಕ್ತಿ ವಂದನ ಅಭಿನಂದನ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂದೇಶ್‌ಖಾಲಿಯಲ್ಲಿ ಮಹಿಳೆಯರಿಗೆ ಆಗಿರುವ ಅನ್ಯಾಯ, ಅವರ ಮೇಲಿನ ದೌರ್ಜನ್ಯ ನಾಚಿಕೆಗೇಡಿನದು ಎಂದು ಹೇಳಿದರು.

'ಆಡಳಿತಾರೂಢ ಟಿಎಂಸಿ ರಾಜ್ಯದ ಮಹಿಳೆಯರ ಸುರಕ್ಷತೆಯ ಬದಲಾಗಿ, ಓಲೈಕೆ ರಾಜಕಾರಣಕ್ಕೆ ಆದ್ಯತೆ ನೀಡುತ್ತಿದೆ' ಎಂದು ಆರೋಪಿಸಿದರು.

'ರಾಜ್ಯ ಹಲವೆಡೆ, ಬಡವರು, ದಲಿತರು ಹಾಗೂ ಬುಡಕಟ್ಟು ಕುಟುಂಬಗಳ ಹೆಣ್ಣು ಮಕ್ಕಳ ಮೇಲೆ ಟಿಎಂಸಿ ನಾಯಕರು ದೌರ್ಜನ್ಯ ಎಸಗುತ್ತಿದ್ದಾರೆ. ಈ ವಿಚಾರವಾಗಿ ಪಶ್ಚಿಮ ಬಂಗಾಳವಲ್ಲದೇ ದೇಶದ ಇತರ ಭಾಗಗಳ ಮಹಿಳೆಯರು ಆಕ್ರೋಶಗೊಂಡಿದ್ದಾರೆ. ಮಹಿಳೆಯರ ಈ ಆಕ್ರೋಶದ ಬಿರುಗಾಳಿ ದೇಶದ ಎಲ್ಲೆಡೆ ವ್ಯಾಪಿಸಲಿದ್ದು, ತೃಣಮೂಲ ಕಾಂಗ್ರೆಸ್ ಪಕ್ಷವನ್ನು ನಾಶ ಮಾಡಲಿದೆ' ಎಂದು ಮೋದಿ ಹೇಳಿದರು.

'ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನೇತೃತ್ವದ ಸರಕಾರವು, ಮಹಿಳಾ ಸಹಾಯವಾಣಿ ಸೇರಿದಂತೆ ಕೇಂದ್ರದ ಯೋಜನೆಗಳನ್ನು ಜಾರಿಗೊಳಿಸುವಲ್ಲಿ ವಿಫಲವಾಗಿದೆ. ಸಂಕಷ್ಟದಲ್ಲಿರುವ ಮಹಿಳೆಯರು ಸುಲಭವಾಗಿ ತಮ್ಮ ದೂರುಗಳನ್ನು ದಾಖಲಿಸಬೇಕು ಎಂಬ ದೃಷ್ಟಿಯಿಂದ ಈ ಸಹಾಯವಾಣಿಯನ್ನು ಆರಂಭಿಸಲಾಗಿದೆ. ಆದರೆ, ಈ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಟಿಎಂಸಿ ಸರಕಾರ ಅನುಮತಿ ನೀಡುತ್ತಿಲ್ಲ. ಇಂತಹ ಮಹಿಳಾ ವಿರೋಧಿ ಸರಕಾರ ಮಹಿಳೆಯರಿಗೆ ಒಳ್ಳೆಯದನ್ನು ಮಾಡಲು ಸಾಧ್ಯ ಇಲ್ಲ' ಎಂದು ಮೋದಿ ಟೀಕಿಸಿದರು.

'ರಾಜ್ಯದ ಅಭಿವೃದ್ಧಿಗೆ ಟಿಎಂಸಿ ಅಡ್ಡಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆಗಳಲ್ಲಿ ಪ್ರತಿಪಕ್ಷಗಳ ಮೈತ್ರಿಕೂಟ 'ಇಂಡಿಯ'ವನ್ನು ತಿರಸ್ಕರಿಸಿ, ಬಿಜೆಪಿಗೆ ಮತ ಹಾಕಿ' ಎಂದು ಮನವಿ ಮಾಡಿದರು.

ನ್ಯಾಯ ದೊರಕಿಸುವಂತೆ ಮಹಿಳೆಯರ ಮೊರೆ

ಟಿಎಂಸಿ ಮುಖಂಡರಿಂದ ಲೈಂಗಿಕ ದೌರ್ಜನ್ಯ ನಡೆದಿದ್ದ ಆರೋಪಗಳಿಂದಾಗಿ ಸುದ್ದಿಯಲ್ಲಿರುವ ಸಂದೇಶ್‌ಖಾಲಿಯ ಮಹಿಳೆಯರ ಗುಂಪನ್ನು ಪ್ರಧಾನಿ ನರೇಂದ್ರ ಮೋದಿ ಬುಧವಾರ ಭೇಟಿ ಮಾಡಿದರು. '24 ಉತ್ತರ ಪರಗಣ ಜಿಲ್ಲೆಯ ಬಾರಾಸತ್‌ನಲ್ಲಿ ನಡೆದ ಪಕ್ಷದ ರ‍್ಯಾಲಿ ಬಳಿಕ ಮೋದಿ ಸಂದೇಶ್‌ಖಾಲಿಯಿಂದ ಬಂದಿದ್ದ ಮಹಿಳೆಯರನ್ನು ಭೇಟಿ ಮಾಡಿದರು' ಎಂದು ಬಿಜೆಪಿಯ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಅಗ್ನಿಮಿತ್ರ ಪೌಲ್ ತಿಳಿಸಿದ್ದಾರೆ. ಪ್ರಧಾನಿ ಅವರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂದೇಶ್‌ಖಾಲಿಯಿಂದ ಬಂದಿದ್ದ ಮಹಿಳೆಯೊಬ್ಬರು 'ಪ್ರಧಾನಿ ನಮ್ಮ ಮಾತುಗಳನ್ನು ಸಮಾಧಾನದಿಂದ ಆಲಿಸಿದರು. ನಮಗೆ ನ್ಯಾಯ ದೊರಕಿಸಿ ಕೊಡುವಂತೆ ಮನವಿ ಮಾಡಿದೆವು' ಎಂದು ತಿಳಿಸಿದರು. 'ರಾಜ್ಯ ಸರಕಾರದ ಮೇಲೆ ನಮಗೆ ವಿಶ್ವಾಸ ಇಲ್ಲ. ಹೀಗಾಗಿ ನಮಗೆ ನ್ಯಾಯ ಸಿಗುವುದನ್ನು ಖಾತ್ರಿಪಡಿಸುವಂತೆ ಕೋರಿದೆವು' ಎಂದೂ ಮಹಿಳೆ ತಿಳಿಸಿದರು.

ಮಹಿಳೆಯರಿದ್ದ ಬಸ್‌ಗಳಿಗೆ ತಡೆ

24 ಉತ್ತರ ಪರಗಣ ಜಿಲ್ಲೆಯ ಬಾರಾಸತ್‌ನಲ್ಲಿ ಹಮ್ಮಿಕೊಂಡಿದ್ದ ಪ್ರಧಾನಿ ನರೇಂದ್ರ ಮೋದಿ ರ‍್ಯಾಲಿಗೆ ತೆರಳುತ್ತಿದ್ದ ಸಂದೇಶ್‌ಖಾಲಿಯ ಮಹಿಳೆಯರಿದ್ದ ಕೆಲ ಬಸ್‌ಗಳನ್ನು 'ಭದ್ರತೆ ಶಿಷ್ಟಾಚಾರ' ಕಾರಣ ನೀಡಿ ಪೊಲೀಸರು ಹಲವೆಡೆ ತಡೆದರು. ತಡೆದು ನಿಲ್ಲಿಸಲಾದ ಬಸ್‌ಗಳಿಂದ ಇಳಿದ 30 ಮಹಿಳೆಯರು ರಾಜ್ಯ ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. 'ಈ ಮಾರ್ಗದಲ್ಲಿ ಪ್ರಧಾನಿಯವರ ಬೆಂಗಾವಲು ವಾಹನಗಳು ಸಾಗುತ್ತಿರುವ ಕಾರಣ ವಾಹನಗಳ ಸಂಚಾರವನ್ನು ನಿಯಂತ್ರಿಸಲಾಗುತ್ತಿದೆ' ಎಂದು ಪೊಲೀಸ್ ಅಧಿಕಾರಿಗಳು ಹೇಳಿದರು. 'ಬಸ್‌ಗಳನ್ನು ಮೊದಲು ನ್ಯೂ ಟೌನ್‌ನ ವಿಶ್ವಬಾಂಗ್ಲಾ ಗೇಟ್ ಬಳಿ ತಡೆಯಲಾಯಿತು. ನಂತರ ಬಾರಾಸತ್‌ಗೆ ತೆರಳುವ ಮಾರ್ಗದಲ್ಲಿ ಏರ್‌ಪೋರ್ಟ್‌ನ ಗೇಟ್ ನಂ.1ರ ಬಳಿ ತಡೆಯಲಾಯಿತು. ಉಳಿದ ಬಸ್‌ಗಳ ಸಂಚಾರಕ್ಕೆ ತಡೆ ಒಡ್ಡದ ಪೊಲೀಸರು ಭದ್ರತೆ ಕಾರಣ ನೀಡಿ ಸಂದೇಶ್‌ಖಾಲಿಯ ಮಹಿಳೆಯರಿದ್ದ ಬಸ್‌ಗಳನ್ನು ಮಾತ್ರ ತಡೆದರು' ಎಂದು ಬಸ್ ಒಂದರಲ್ಲಿ ಬಿಜೆಪಿ ನಾಯಕರೊಬ್ಬರು ಆರೋಪಿಸಿದ್ದಾರೆ. ಟಿಎಂಸಿಯಿಂದ ಅಮಾನತುಗೊಂಡಿರುವ ಮುಖಂಡ ಶಹಜಹಾನ್ ಹಾಗೂ ಅವರ ಬೆಂಬಲಿಗರಿಂದ ದೌರ್ಜನ್ಯಕ್ಕೆ ಒಳಗಾದ ಎನ್ನಲಾದ ಮಹಿಳೆಯರನ್ನು ರ‍್ಯಾಲಿ ಸ್ಥಳಕ್ಕೆ ಕರೆದೊಯ್ಯಲು ಬಿಜೆಪಿ ರಾಜ್ಯ ಘಟಕವು ಬಸ್‌ಗಳ ವ್ಯವಸ್ಥೆ ಮಾಡಿತ್ತು.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಂಎಸ್‌ಪಿ, ಜಾತಿಗಣತಿ ಜಾರಿಗೆ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪುನರುಚ್ಚಾರ

ಬದ್ನಾವರ್: ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಜಾತಿ ಗಣತಿ ಹಾಗೂ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ(ಎಂಎಸ್‌ಪಿ) ಕಾಯಿದೆ ಜಾರಿಗೆ ತರಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಹೇಳಿದ್ದಾರೆ.

ಭಾರತ ಜೋಡೊ ನ್ಯಾಯ ಯಾತ್ರೆಯ ಭಾಗವಾಗಿ ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಜಾತಿ ಗಣತಿಯು ಹಸಿರು ಹಾಗೂ ಶ್ವೇತ ಕ್ರಾಂತಿಯಷ್ಟೇ ದೊಡ್ಡ ಕ್ರಾಂತಿಕಾರಿ ಹೆಜ್ಜೆಯಾಗಲಿದೆ ಎಂದು ತಿಳಿಸಿದ್ದಾರೆ.

ಜಾತಿ ಗಣತಿಯು ದೇಶದಲ್ಲಿರುವ ಎಸ್‌ಸಿ, ಎಸ್‌ಟಿ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಬಗ್ಗೆ ನಿಖರವಾದ ಮಾಹಿತಿ ಒದಗಿಸುತ್ತದೆ. ಈ ಮೂಲಕ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ